O.S. No. 44/2025 chief of PW-1

ದಿಃ 23-04-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿ ಮುಖ್ಯ ವಿಚಾರಣೆಗೆ ಒಳಪಡಿಸಲಾಯಿತು.

**ಮುಖ್ಯ ವಿಚಾರಣೆಃ** ವಾದಿಯರ ಪರವಾಗಿ ಶ್ರೀ ಎ ಎಫ್ ಕೆ ವಕೀಲರಿಂದ.

ಈ ದಾವೆಯಲ್ಲಿ ನಾನು ವಾದಿಯಾಗಿದ್ದು, ಇಂದು ನಾನು ಮಾನ್ಯ ನ್ಯಾಯಾಲಯಕ್ಕೆ ನನ್ನ ಮುಖ್ಯ ವಿಚಾರಣೆ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲ ಅಂಶಗಳು ಸತ್ಯವಾಗಿರುತ್ತವೆ ಮತ್ತು ಸದ್ರಿ ಅಂಶಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

**ಇಂದು ನಾನು ಮಾನ್ಯ ನ್ಯಾಯಾಲಯಕ್ಕೆ**

1) ಮೂರು ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ **ನಿಪಿ 1 ರಿಂದ 3 ಎಂದು,**
2) ಎಮ್ ಆರ್ ನಂಬರ ಟಿ46-2018-19 ರ ದೃಢಿಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು **ನಿಪಿ 4 ಎಂದು,**
3) ದಿನಾಂಕ 07-07-2010 ರ ನೋಂದಾಯಿತ ಕ್ರಯ ಪತ್ರವನ್ನು ಹಾಜರುಪಡಿಸಿದ್ದು ಅದನ್ನು **ನಿಪಿ 5 ಎಂದು,**
4) ಅಸಲು ದಾವಾ ಸಂಖ್ಯೆ 19/2020 ತೀರ್ಪು ಮತ್ತು ಡಿಕ್ರಿಯ ದೃಢಿಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾರೆಯಾಗಿ **ನಿಪಿ 6 ಎಂದು,**
5) ಒಂದು ಆಧಾರ ಕಾರ್ಡನ್ನು ಹಾಜರುಪಡಿಸಿದ್ದು ಅದನ್ನು **ನಿಪಿ 7 ಎಂದು** ಗುರುತಿಸಲಾಯಿತು.

ಆದ್ದರಿಂದ ನನ್ನ ದಾವೆಯನ್ನು ಡಿಕ್ರಿ ಮಾಡಲು ಕೋರುತ್ತೇನೆ.

**ಪಾಟೀ ಸವಾಲುಃ** ದಾವೆ ಏಕಪಕ್ಷೀಯವಾಗಿದ್ದರಿಂದ ಪಾಟೀ ಸವಾಲನ್ನು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

O.S. No. 44/2025 chief of PW-1

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ).

ಓ.ಹೆ.ಕೇ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾದಂ., ಹಳಿಯಾಳ.